ಇ) ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬಲು ಸರ್ಕಾರ ವಿಶೇಷ ನೇಮಕಾತಿ ನಿಯಮಗಳನ್ನು ಒಳಗೊಂಡ ಅಧಿಸೂಚನೆಯನ್ನು ದಿನಾಂಕ 21-11-2001 ರಂದು ಹೊರಡಿಸಿದ್ದು ಈ ಪ್ರಕಾರ ನೇಮಕಾತಿ ಪ್ರಾಧಿಕಾರಿಗಳು ಕ್ರಮ ತೆಗೆದುಕೊಂಡಿರುತ್ತಾರೆ. ನೇಮಕಾತಿಯಲ್ಲಿ ಆಗಿರುವ ಪ್ರಗತಿ ಪರಿಶೀಲಿಸಲು ಮತ್ತು ಅಡಚಣೆಗಳ ಬಗ್ಗೆ ಚರ್ಚಿಸಿ ಸೂಕ್ತ ಮಾರ್ಗೋಪಾಯ ಸೂಚಿಸಲು ಸರ್ಕಾರವು ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಿದ್ದು ಈ ಸಮಿತಿಯ ಕಾಲ ಕಾಲಕ್ಕೆ 8 ಬಾರಿ ಸಭೆ ಸೇರಿ ಪರಿಶೀಲನೆ ನಡೆಸಿರುತ್ತದೆ. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಆಗಾಗ್ಗೆ ಕಾರ್ಯದರ್ಶಿಗಳ ಸಭೆಯಲ್ಲಿ ಈ ವಿಷಯ ಪರಿಶೀಲಿಸಿರುತ್ತಾರೆ. ಇದರ ಜೊತೆಗೆ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಸಾಧ್ಯವಿರುವ ಎಲ್ಲಾ ಕ್ರಮಗಳನ್ನು ಸರ್ಕಾರ ತೆಗೆದುಕೊಂಡಿದೆ. ಈ ಎಲ್ಲಾ ಕ್ರಮಗಳಿಂದ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಯ ಪ್ರಕ್ರಿಯೆ ಪರಿಣಾಮಕಾರಿಯಾಗಿ ನಡೆಯುತ್ತದೆ.

ಈ) ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಗಳನ್ನು ಜಾರಿಗೆ ತಂದಿದ್ದು, ಆ ಪ್ರಕಾರ 29 ರಿಂದ 40 ವಯೋಮಿತಿಗೆ ಒಳಪಟ್ಟ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಅಂತಹ ಅಭ್ಯರ್ಥಿಗಳು ಲಭ್ಯವಿಲ್ಲದೆ ಇದ್ದಲ್ಲಿ 18 ರಿಂದ 28 ವರೆಗಿನ ವಯಸ್ಸಿನ ಅಭ್ಯರ್ಥಿಗಳನ್ನು ಅಂಕಗಳ ಆಧಾರದ ಮೇಲೆ ಜೇಷ್ಠತಾ ಪಟ್ಟಿ ತಯಾರಿಸಿ ಪರಿಗಣಿಸಲಾಗುತ್ತದೆ.

ಉ) ಕೆಲವು ಅನುದಾನಿತ ಶಿಕ್ಷಣ ಸಂಸ್ಥೆ ನಿಗಮ ಮಂಡಳಿ ವಿಶ್ವವಿದ್ಯಾನಿಲಯಗಳಲ್ಲಿ ಈ ಮೇಲಿನ ನಿಯಮಗಳನ್ನು ಪಾಲಿಸುತ್ತಿಲ್ಲವೆಂಬ ದೂರುಗಳು ಬಂದಿದ್ದು ಆ ಬಗ್ಗೆ ಸೂಕ್ತ ಕ್ರಮ ತೆಗೆದುಕೊಂಡು ಸರ್ಕಾರದ ನಿಯಮದ ಪ್ರಕಾರವೇ ಆಯ್ಕೆ ಮಾಡಬೇಕೆಂದು ಸಂಬಂಧಪಟ್ಟವರಿಗೆ ಸೂಚನೆ ನೀಡಲಾಗಿದೆ ಇದನ್ನು ಉಲ್ಲಂಘಿಸುವವರು ಮೇಲೆ ಕ್ರಮ ಜರುಗಿಸಲಾಗುವುದು.

ತುರುವೇಕೆರೆ ತಾಲ್ಲೂಕು ಹನುಮಾಪುರ ಆಶ್ರಮ ಶಾಲೆಗೆ ಕಟ್ಟಡ ನಿರ್ಮಾಣ

1597 (2046) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ಮಾಯಸಂದ್ರ ಹೋಬಲಿ ಹನುಮಾಪುರ ಗ್ರಾಮದಲ್ಲಿ ಆಶ್ರಮ ಶಾಲೆ ಯಾವಾಗ ಪ್ರಾರಂಭ ಆಯಿತು;

ಆ) ಇಲ್ಲಿ ನಡೆಯುತ್ತಿರುವ ಆಶ್ರಯ ಶಾಲೆಯ ಕಟ್ಟಡ ಮಕ್ಕಳು ಓದುವ ಸ್ಥಿತಿಯಲ್ಲಿ ಇದೆಯೇ;

ಇ) ತುಂಬಾ ಹದಗೆಟ್ಟಿರುವ ಈ ಕಟ್ಟಡದ ಬದಲು ಹೊಸ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ಹಾಗಿದ್ದಲ್ಲಿ, ಈ ವರ್ಷದ ಆಯವ್ಯಯದಲ್ಲಿ ಅನುದಾನವನ್ನು ನೀಡುವುದೇ?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ದಿನಾಂಕ 8-12-2001 ರಂದು ತುರುವೇಕೆರೆ ತಾಲ್ಲೂಕು ಮಾಯಸಂದ್ರ ಹೋಬಳಿ ಹನುಮಾಪುರ ಗ್ರಾಮದಲ್ಲಿ ಆಶ್ರಮ ಶಾಲೆಯನ್ನು ಪ್ರಾರಂಭಿಸಲಾಗಿದೆ.

ಆ) ಇಲ್ಲ.

ಇ) ಹೌದು. ಸ್ವಂತ ಕಟ್ಟಡವನ್ನು ಸರ್ಕಾರದ ವತಿಯಿಂದ ನಿರ್ಮಿಸಲು ಪರಿಶೀಲಿಸಲಾಗುತ್ತಿದೆ. ನಿವೇಶನ ಲಭ್ಯವಾದಲ್ಲಿ ಸ್ವಂತ ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು.

ಈ) ನಿವೇಶನ ಪಡೆದ ನಂತರ ಅಂದಾಜು ನಕ್ಷೆಯನ್ನು ತಯಾರಿಸಿ, ಈ ಕಟ್ಟಡ ಕಾಮಗಾರಿಗೆ ಅನುದಾನವನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ತುರುವೇಕೆರೆ ತಾಲ್ಲೂಕು ಕಣತ್ತೂರು ಗ್ರಾಮಕ್ಕೆ ಪಶುವೈದ್ಯ ಶಾಲೆ ಪ್ರಾರಂಭ

1598 (2091) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ): ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕು ದಬ್ಬೇಗಟ್ಟ ಹೋಬಳಿ ಕಣತ್ತೂರು ದೊಡ್ಡಗ್ರಾಮವಾಗಿದ್ದರೂ ಪಶು ಆಸ್ಪತ್ರೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದಾಗಿ ಸುಮಾರು 7-8 ಕಿಲೋ ಮೀಟರ್ ಸುತ್ತ ಮುತ್ತ ಇರುವ ಹಳ್ಳಿಗಳ ಜಾನುವಾರುಗಳಿಗೆ ತುಂಬಾ ತೊಂದರೆಯಾಗಿರುವುದನ್ನು ಗಮನಿಸಲಾಗಿದೆಯೇ;

ಇ) ಹಾಗಿದ್ದಲ್ಲಿ, ಇಲ್ಲಿ ಪಶು ಆಸ್ಪತ್ರೆ ತೆರೆಯಲು ಸರ್ಕಾರಕ್ಕೆ ಇರುವ ತೊಂದರೆಯೇನು;

ಈ) ಯಾವಾಗ ತೆರೆಯಲಾಗುವುದು; ಈ ವರ್ಷದ ಆಯವ್ಯಯದಲ್ಲಿ ಸೇರಿಸಲಾಗುವುದೇ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ಬಂದಿದೆ.

ಆ) ತಂಡಗ ಗ್ರಾಮದಲ್ಲಿ ಪಶುಚಿಕಿತ್ಸಾಲಯ ಇದೆ. ಈ ಗ್ರಾಮವು ಕಣತ್ತೂರಿಗೆ 6 ಕಿ.ಮೀ. ಅಂತರದಲ್ಲಿರುವುದು. ಕಣತ್ತೂರು ಹಳ್ಳಿಯಲ್ಲಿ 819 ಜಾನುವಾರುಗಳಿದ್ದು ಇಷ್ಟು ಜಾನುವಾರುಗಳಿಗೆ ಹೊಸ ಪಶುವೈದ್ಯಕೀಯ ಕೇಂದ್ರವನ್ನು ತೆರೆಯಲು ಅವಕಾಶವಿಲ್ಲ.

ಇ) ಹೊಸ ಪಶುವೈದ್ಯಕೀಯ ಸಂಸ್ಥೆಗಳನ್ನು ತೆರೆಯುವ ಕಾರ್ಯಕ್ರಮ ಸರ್ಕಾರದ ಮುಂದೆ ಇರುವುದಿಲ್ಲ.

ಈ) 'ಇ' ಉತ್ತರದ ಹಿನ್ನೆಲೆಯಲ್ಲಿ ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಮೀನುಗಾರಿಕೆ ಇಲಾಖೆಯ ಮನೆಗಳ ನಿರ್ಮಾಣ

1599 (2092) ಶ್ರೀ ಲಕ್ಷ್ಮೀನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ): ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ ಸಾಲಿನಲ್ಲಿ ಮನೆ ಕಟ್ಟಲು ಮೀನುಗಾರರಿಂದ ಅರ್ಜಿ ಸ್ವೀಕಾರ ಮಾಡಿರುವುದು ನಿಜವೇ?

ಆ) ಹಾಗಿದ್ದಲ್ಲಿ, ಮನೆಗಳ ನಿರ್ಮಾಣಕ್ಕೆ ಅನುದಾನ ನೀಡದಿರುವ ಕಾರಣವೇನು?

ಇ) ಫಲಾನುಭವಿಗಳು ಈಗಾಗಲೇ ಮನೆ ಇಲ್ಲದೆ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಈ ಸಾಲಿನ ಆಯವ್ಯಯದಲ್ಲಿ ಹಣವನ್ನು ಮಂಜೂರು ಮಾಡಲಾಗುವುದೇ?

ಶ್ರೀ ವಿ. ವಸಂತ ವಿ ಸಾಲಿಯಾನ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು):

ಅ) ಹೌದು.